ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 03–10–2017

# ಪತ್ರಿಕಾ ಆಮಂತ್ರಣ

1. ಐವತ್ತೆರಡನೆಯ ಸಂಸ್ಥಾಪನಾ ದಿನಾಚರಣೆ:

ಉದ್ಘಾಟನೆ:

ಕೃಷ್ಣ ಬೈರೇಗೌಡ, ಕೃಷಿ ಸಚಿವರು.

ಮುಖ್ಯ ಅತಿಥಿಗಳು:

ಡಾ. ನರೇಂದ್ರ ಸಿಂಗ್ ರಾಥೋಡ್, ಉಪ ಮಹಾ ನಿರ್ದೇಶಕರು, (ಶಿಕ್ಷಣ) ಭಾರತೀಯ ಕೃಷಿ ಅನುಸಂಧಾನ ಪರಿಷತ್ತು, ನವದೆಹಲಿ.

ಅಧ್ಯಕ್ಷತೆ:

ಡಾ. ಹೆಚ್. ಶಿವಣ್ಣ, ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.
ದಿನಾಂಕ: 04–10–2017, ಬುಧವಾರ,. ಸಮಯ: ಬೆಳಿಗ್ಗೆ 10.00 ಗಂಟೆಗೆ

ಸ್ಥಳ: ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಮಾವೇಶ ಭವನ, ಜಿ.ಕೆ.ವಿ.ಕೆ. ಬೆಂಗಳೂರು.

ವಿ.ಸೂ: ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 9.15 ಗಂಟೆಗೆ ಕಬ್ಬನ್ ಪಾರ್ಕ್‌ನಲ್ಲಿರುವ ಪ್ರೆಸ್ ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

ಸಂಪರ್ಕ: ಡಾ. ಕೆ. ಶಿವರಾಮು, ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾತಜ್ಞರು, ಮೊ. ಸಂಖ್ಯೆ 9972035456 ಮೂಲಕ ಸಂಪರ್ಕಿಸಬಹುದಾಗಿದೆ.

**2. Meeting of Group of Ministers (GOM) constituted to monitor and resolve the IT challenges faced in implementation of GST**
**After Completion of Meeting Press Meet:**
**Sushil Kumar Modi,**
**Deputy Chief Minister of Bihar**

**Date: 4-10-2017 Wednesday at 1.00 PM**
**Venue: Crown Plaza Hotel, Electronics City, Bengaluru**

3. ಪತ್ರಿಕಾಗೋಷ್ಠಿ:
ಹೆಚ್. ಆಂಜನೇಯ,
ಸಮಾಜ ಕಲ್ಯಾಣ ಸಚಿವರು
ದಿನಾಂಕ: 4-10-2017 ಬುಧವಾರ, ಮಧ್ಯಾಹ್ನ 1-30 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 334, ಸಮ್ಮೇಳನ ಸಭಾಂಗಣ, ಮೂರನೇ ಮಹಡಿ,
ವಿಧಾನ ಸೌಧ, ಬೆಂಗಳೂರು

4. ಬೆಂಗಳೂರು ಡಾ. ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್, .
ಬೆಂಗಳೂರು ಇದರ ಶೈಕ್ಷಣಿಕ ಪ್ರಾರಂಭೋತ್ಸವ:

<u>ಉದ್ಘಾಟನೆ:</u>

ಡಾ. ಮನಮೋಹನ್ ಸಿಂಗ್, ಮಾಜಿ ಪ್ರಧಾನ ಮಂತ್ರಿಗಳು
ಹಾಗೂ ರಾಜ್ಯಸಭಾ ಸದಸ್ಯರು

<u>ಘನ ಅಧ್ಯಕ್ಷತೆ:</u>

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ: 04-10-2017, ಬುಧವಾರ,. ಸಮಯ: ಸಂಜೆ: 4-00 ಗಂಟೆಗೆ
ಸ್ಥಳ: ಡಾ. ಬಿ.ಆರ್. ಅಂಬೇಡ್ಕರ್ ಭವನ, ಮಿಲ್ಲರ್ಸ್ ರಸ್ತೆ, ವಸಂತ ನಗರ, ಬೆಂಗಳೂರು.
ವಿ.ಸೂ: ಮಾನ್ಯತೆ ಪಡೆದ ರಾಜ್ಯ ಮತ್ತು ರಾಷ್ಟ್ರಮಟ್ಟದ ದಿನಪತ್ರಿಕೆಗಳು ಹಾಗೂ ಸುದ್ದಿ ವಾಹಿನಿಗಳ ವರದಿಗಾರರು, ಛಾಯಾಗ್ರಾಹಕರು/ ಕ್ಯಾಮರಾಮನ್‌ಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಪಡೆದ ಆಹ್ವಾನ ಪತ್ರ ಹಾಗೂ ಪೊಲೀಸ್ ಆಯುಕ್ತರ ಕಚೇರಿಯಿಂದ ಪಡೆದ ಭದ್ರತಾ ರಹದಾರಿ ಪತ್ರದೊಂದಿಗೆ ಕಾರ್ಯಕ್ರಮಕ್ಕೆ ಆಗಮಿಸಲು ಕೋರಿದೆ.

# ಮಾಧ್ಯಮದವರ ಗಮನಕ್ಕೆ

ಭಾರತದ ಮಾಜಿ ಪ್ರಧಾನಮಂತ್ರಿ ಡಾ: ಮನ್‌ಮೋಹನ್‌ಸಿಂಗ್ ಅವರು ದಿನಾಂಕ 04–10–2017 ರಂದು ಸಂಜೆ 4–00 ಗಂಟೆಗೆ ಬೆಂಗಳೂರು ಡಾ: ಬಿ.ಆರ್. ಅಂಬೇಡ್ಕರ್ ಸ್ಕೂಲ್ ಎಕನಾಮಿಕ್ಸ್ ಇದರ ಶೈಕ್ಷಣಿಕ ಪ್ರಾರಂಭೋತ್ಸವವನ್ನು ಡಾ: ಬಿ.ಆರ್. ಅಂಬೇಡ್ಕರ್ ಭವನ, ಮಿಲ್ಲರ್ಸ್ ರಸ್ತೆ, ವಸಂತನಗರ, ಬೆಂಗಳೂರು ಇಲ್ಲಿ ಉದ್ಘಾಟಿಸುವರು.

ಈ ಕಾರ್ಯಕ್ರಮದ ವರದಿ ಮಾಡಲು ಮಾಧ್ಯಮದವರಿಗೆ ಅನುಕೂಲವಾಗುವಂತೆ ರಾಷ್ಟ್ರ ಮತ್ತು ರಾಜ್ಯಮಟ್ಟದ ದಿನಪತ್ರಿಕೆಗಳ ಸುದ್ದಿವಾಹಿನಿಗಳ ಮಾನ್ಯತೆ ಪಡೆದ ತಲಾ ಒಬ್ಬ ವರದಿಗಾರ ಹಾಗೂ ಒಬ್ಬ ಛಾಯಾಗ್ರಾಹಕ/ಕ್ಯಾಮರಾಮನ್‌ಗೆ ಪ್ರವೇಶ ಪತ್ರ ನೀಡಲಾಗುವುದು.

ಮಾಧ್ಯಮ ಮಿತ್ರರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಯಿಂದ ಆಹ್ವಾನ ಪತ್ರವನ್ನು ಪಡೆದು ಪೊಲೀಸ್ ಆಯುಕ್ತರ ಕಛೇರಿಯಿಂದ ಭದ್ರತಾ ರಹದಾರಿ ಪತ್ರಗಳನ್ನು ಪಡೆದುಕೊಳ್ಳಬಹುದು.

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

**ಸಂಖ್ಯೆ:144/264**

# ಅಕ್ಟೋಬರ್ 5 ರಂದು ಮಹರ್ಷಿ ವಾಲ್ಮೀಕಿ ಪುತ್ಥಳಿ ಮುಖ್ಯಮಂತ್ರಿ ಅವರಿಂದ ಅನಾವರಣ – ವಿ.ಎಸ್. ಉಗ್ರಪ್ಪ

**ಬೆಂಗಳೂರು, ಅಕ್ಟೋಬರ್ 03 ( ಕರ್ನಾಟಕ ವಾರ್ತೆ) :**

ವಿಧಾನಸೌಧದ ಪಶ್ಚಿಮ ದ್ವಾರದ ಬಲಭಾಗದಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ತಪೋವನದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಮಹರ್ಷಿ ವಾಲ್ಮೀಕಿ ಪ್ರತಿಮೆ ಹಾಗೂ ತಪೋವನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯರವರು ಅಕ್ಟೋಬರ್ 5 ರಂದು ಲೋಕಾರ್ಪಣೆ ಮಾಡಲಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯರು ಹಾಗೂ ಮಹಿಳೆ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಮತ್ತು ವರದಿ ನೀಡುವ ಸಮಿತಿಯ ಅಧ್ಯಕ್ಷರೂ ಆದ ವಿ.ಎಸ್. ಉಗ್ರಪ್ಪ ಅವರು ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಸುಮಾರು 2.5 ಎಕರೆ ಪ್ರದೇಶದಲ್ಲಿ ವಾಲ್ಮೀಕಿ ತಪೋವನ ನಿರ್ಮಾಣ ಮಾಡಲಾಗಿದ್ದು 12 ಅಡಿ ಎತ್ತರದ ಕಪ್ಪು ಶಿಲೆಯ ವಾಲ್ಮೀಕಿ ಪುತ್ಥಳಿ ನಿರ್ಮಿಸಲಾಗಿದೆ. ಈ ಪ್ರತಿಮೆ 20 ಟನ್ ತೂಕ ಹೊಂದಿದ್ದು, ಸುಮಾರು ಒಂದು ಕೋಟಿ ರೂ. ಅಂದಾಜಿನಲ್ಲಿ ಈ ಪ್ರತಿಮೆಯನ್ನು ನಿರ್ಮಿಸಲಾಗಿದೆ. ಈ ಪ್ರತಿಮೆಯ ಖರ್ಚನ್ನು ಸಮಾಜದವರು ನೀಡಿರುವ ದೇಣಿಗೆಯಿಂದ ನಿರ್ಮಿಸಲಾಗಿದೆ ಎಂದರು.

ಸಮಾರಂಭಕ್ಕೂ ಮೊದಲು ರಾಜ್ಯದ ನಾಲ್ಕು ವಿಭಾಗಗಳಿಂದ ಬಂದಿರುವ ಜ್ಯೋತಿಯನ್ನು ಬಸವನಗುಡಿಯ ಬೇಡರ ಕಣ್ಣಪ್ಪ ಗುಡಿಯಿಂದ ಚಾಲುಕ್ಯ ವೃತ್ತದ ಮೂಲಕ ಪುತ್ಥಳಿ ಇರುವ ಸ್ಥಳಕ್ಕೆ ತರಲಾಗುವುದು. ಮುಖ್ಯಮಂತ್ರಿ ಹಾಗೂ ಸಮಾಜ ಕಲ್ಯಾಣ ಸಚಿವರು ಜ್ಯೋತಿಯನ್ನು ಬರಮಾಡಿಕೊಳ್ಳಲಿದ್ದಾರೆ ಎಂದು ತಿಳಿಸಿದರು. ಅದೇ ದಿನ ಬೆಳಿಗ್ಗೆ 11.30 ಗಂಟೆಗೆ ವಿಧಾನಸೌಧದ ಪೂರ್ವಭಾಗದಲ್ಲಿ ರಾಜ್ಯಮಟ್ಟದ ವಾಲ್ಮೀಕಿ ಜಯಂತಿ ಕಾರ್ಯಕ್ರಮ ನಡೆಯಲಿದ್ದು, ಇದೇ ಸಂದರ್ಭದಲ್ಲಿ ಪ್ರಸಕ್ತ ಸಾಲಿನ ವಾಲ್ಮೀಕಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಡೆಸಿಕೊಡಲಿದ್ದಾರೆ ಎಂದರು.

ಸಮಾರಂಭದಲ್ಲಿ ವಾಲ್ಮೀಕಿ ಸಮುದಾಯದ ಹಲವು ಬೇಡಿಕೆಗಳನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದ ಉಗ್ರಪ್ಪ ಅವರು ಶೈಕ್ಷಣಿಕವಾಗಿ ಮತ್ತು ಉದ್ಯೋಗದಲ್ಲಿ ಶೇ 7.5 ರಷ್ಟು ಮೀಸಲಾತಿ ನೀಡುವಂತೆ ಮನವಿ ಮಾಡಲಾಗುವುದು. ಅಲ್ಲದೆ ಪರಿಶಿಷ್ಟ ಪಂಗಡಕ್ಕೆ ಪ್ರತ್ಯೇಕ ಸಚಿವಾಲಯ ಪ್ರಾರಂಭಿಸುವಂತೆ ರಾಜ್ಯದ ಒಂದು ವಿಶ್ವವಿದ್ಯಾಲಯಕ್ಕೆ ಮಹರ್ಷಿ ವಾಲ್ಮೀಕಿ ಅವರ ಹೆಸರಿಸುವಂತೆ ಸರ್ಕಾರಕ್ಕೆ ಬೇಡಿಕೆ ಸಲ್ಲಿಸಲಾಗುವುದು ಎಂದು ಉಗ್ರಪ್ಪ ಅವರು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಸುಮಾರು ಒಂದು ಲಕ್ಷಕ್ಕೂ ಹೆಚ್ಚು ಜನ ಸೇರುವ ನಿರೀಕ್ಷೆ ಇದೆ. ಮಹರ್ಷಿ ವಾಲ್ಮೀಕಿ ಅವರ ವಿಚಾರಧಾರೆಯಲ್ಲಿ ನಂಬಿಕೆ ಇರುವ ಎಲ್ಲರೂ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಮನವಿ ಮಾಡಿದ ಉಗ್ರಪ್ಪ ಅವರು ಅಂದು ಕಾರ್ಯಕ್ರಮದಲ್ಲಿ ಭಾಗವಹಿಸುವ 50,000 ಜನರಿಗೆ ಊಟ, ತಿಂಡಿ ವ್ಯವಸ್ಥೆ ಮಾಡಲಾಗಿದ್ದು ವಾಹನ ನಿಲುಗಡೆಗೂ ಅರಮನೆ ಮೈದಾನ ಹಾಗೂ ಸೆಂಟ್ರಲ್ ಕಾಲೇಜಿನ ಸ್ಟೇಡಿಯಂನಲ್ಲಿ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳ ಗ್ರಂಥಾಲಯಗಳಲ್ಲಿ ಮೂಲ ರಾಮಾಯಣ ಗ್ರಂಥವನ್ನು ಸರಬರಾಜು ಮಾಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದು ಉಗ್ರಪ್ಪ ಅವರು ಈ ಸಂದರ್ಭದಲ್ಲಿ ತಿಳಿಸಿದರು.

*****